# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲ್ಲೂಕಿನಲ್ಲಿ ಮಾನವ ಚಾಲಿತ ಕೃಷಿ ಉಪಕರಣಗಳ ವಿತರಣೆಯಲ್ಲಿ ಇಲಾಖೆಯ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವ ಸಂಬಂಧ ಜಂಟಿ ಇಲಾಖಾ ವಿಚಾರಣೆಗೆ ವಿಚಾರಣಾಧಿಕಾರಿಗಳ ನೇಮಕದ ಆದೇಶ.

**ಓದಲಾಗಿದೆ:**

1. ಕೃಷಿ ಆಯುಕ್ತರ ಪತ್ರ ಸಂ: ಸಿಬ್ಬಂದಿ–1/ವಿಚಾರಣೆ–1/07/2010–2011. ದಿನಾಂಕ : 03–01–2011.
2. ಕಾರಣ ಕೇಳುವ ಪತ್ರ ಸಂಖ್ಯೆ: ಕೃತೋಇ 42 ಕೃಪವಿ 2010. ದಿ: 03–08–2011.
3. ಶ್ರೀ ಆರ್. ಎಸ್. ಶೇಖರ್, ಸಹಾಯಕ ಕೃಷಿ ನಿರ್ದೇಶಕರು, ಇವರ ರಕ್ಷಣಾ ಹೇಳಿಕೆ ದಿನಾಂಕ: 01–10–2011.
4. ಶ್ರೀ ಎನ್.ವಿ. ಮುರಳಿಕೃಷ್ಣ, ಸಹಾಯಕ ಕೃಷಿ ಅಧಿಕಾರಿ, ಇವರ ರಕ್ಷಣಾ ಹೇಳಿಕೆ ದಿನಾಂಕ: 17–09–2012.

*********

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಪತ್ರದಲ್ಲಿ ಶ್ರೀ ಆರ್. ಎಸ್. ಶೇಖರ್, ಸಹಾಯಕ ಕೃಷಿ ನಿರ್ದೇಶಕರು, ಕೊಪ್ಪ ಮತ್ತು ಶ್ರೀ ಎನ್.ವಿ. ಮುರಳಿಕೃಷ್ಣ, ಸಹಾಯಕ ಕೃಷಿ ಅಧಿಕಾರಿ, ರೈತ ಸಂಪರ್ಕ ಕೇಂದ್ರ, ಕೊಪ್ಪ, ಇವರು ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲ್ಲೂಕಿನಲ್ಲಿ ಮಾನವ ಚಾಲಿತ ಕೃಷಿ ಉಪಕರಣಗಳ ವಿತರಣೆಯಲ್ಲಿ ಇಲಾಖೆಯ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವ ಸಂಬಂಧ ಸದರಿ ಅಧಿಕಾರಿಯವರ ವಿರುದ್ಧ ಶಿಸ್ತುಕ್ರಮ ಜರುಗಿಸಲು ಕೃಷಿ ಆಯುಕ್ತರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಅದರಂತೆ ಶ್ರೀ ಆರ್. ಎಸ್. ಶೇಖರ್, ಸಹಾಯಕ ಕೃಷಿ ನಿರ್ದೇಶಕರು, ಮತ್ತು ಶ್ರೀ ಎನ್.ವಿ. ಮುರಳಿಕೃಷ್ಣ, ಸಹಾಯಕ ಕೃಷಿ ಅಧಿಕಾರಿ, ಇವರಿಗೆ ಕಾರಣ ಕೇಳುವ ನೋಟೀಸ್‌ನ್ನು ದೋಷಾರೋಪಣೆ ಪಟ್ಟಿಯೊಡನೆ ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ ಜಾರಿ ಮಾಡಲಾಗಿತ್ತು. ಸದರಿ ಅಧಿಕಾರಿಗಳು ಮೇಲೆ (3) ಮತ್ತು (4) ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರಕ್ಕೆ ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿ, ತಮ್ಮ ಮೇಲಿನ ಆರೋಪಗಳನ್ನು ಅಲ್ಲಗಳೆದು ತಮ್ಮನ್ನು ದೋಷಮುಕ್ತರನ್ನಾಗಿಸುವಂತೆ ಕೋರಿರುತ್ತಾರೆ. ಸದರಿ ಅಧಿಕಾರಿಗಳು ಸಲ್ಲಿಸಿರುವ ಲಿಖಿತ ಹೇಳಿಕೆಗಳನ್ನು ನೋಡಲಾಗಿ, ಅವರ ಹೇಳಿಕೆಯಲ್ಲಿ ಪರಿಶೀಲಿಸುವಂತಹ ಅಂಶಗಳು ಇಲ್ಲವಾದ್ದರಿಂದ ಪ್ರಕರಣದ ಸತ್ಯಾಸತ್ಯತೆಯನ್ನು ತಿಳಿಯಲು ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು ತೀರ್ಮಾನಿಸಿ, ಶ್ರೀ ಕೆ. ರಾಧಕೃಷ್ಣ ಹೊಳ್ಳ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,

--2--

ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಚಿಕ್ಕಮಗಳೂರು, ಜಂಟಿ ಕೃಷಿ ನಿರ್ದೇಶಕರ ಕಛೇರಿಯ ಅಧೀಕ್ಷಕರನ್ನು ಮಂಡನಾಧಿಕಾರಿಯಾಗಿ ನೇಮಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 42 ಕೃಪವಿ 2010.**
**ಬೆಂಗಳೂರು. ದಿನಾಂಕ: 03/12/2012.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಆರ್. ಎಸ್. ಶೇಖರ್, ಸಹಾಯಕ ಕೃಷಿ ನಿರ್ದೇಶಕರು, ಮತ್ತು ಶ್ರೀ ಎನ್.ವಿ. ಮುರಳಿಕೃಷ್ಣ, ಸಹಾಯಕ ಕೃಷಿ ಅಧಿಕಾರಿ, ಇವರು ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲ್ಲೂಕಿನಲ್ಲಿ ಮಾನವ ಚಾಲಿತ ಕೃಷಿ ಉಪಕರಣಗಳ ವಿತರಣೆಯಲ್ಲಿ ಇಲಾಖೆಯ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವ ಸಂಬಂಧ ಸದರಿ ಅಧಿಕಾರಿಯವರ ವಿರುದ್ಧ ಆಪಾದನೆಗೆ ಸಂಬಂಧಿಸಿದಂತೆ, ಅವರ ಮೇಲೆ ಜಂಟಿ ಇಲಾಖಾವಿಚಾರಣೆ ನಡೆಸಲು ಸರ್ಕಾರವು ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11ರ ಜೊತೆಗೆ ನಿಯಮ 13ರಲ್ಲಿ ಪ್ರದತ್ತವಾಗಿರುವ ಅಧಿಕಾರ ಚಲಾಯಿಸಿ ಶ್ರೀ ಕೆ. ರಾಧಕೃಷ್ಣ ಹೊಳ್ಳ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ.

ಹಾಗೂ ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11ರ ಉಪ ನಿಯಮ 5(ಸಿ)ಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶಿಸ್ತು ಪ್ರಾಧಿಕಾರಿಯ ಪರವಾಗಿ ವಿಷಯ ಮಂಡಿಸಲು ಅಧೀಕ್ಷಕರು, ಜಂಟಿ ಕೃಷಿ ನಿರ್ದೇಶಕರ ಕಛೇರಿ, ಚಿಕ್ಕಮಗಳೂರು, ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ.

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಆಯುಕ್ತರು, ಕೃಷಿ ಇಲಾಖೆ, ಬೆಂಗಳೂರು.
3. ಜಂಟಿ ಕೃಷಿ ನಿರ್ದೇಶಕರು, ಚಿಕ್ಕಮಗಳೂರು.

--3--

4. ಶ್ರೀ ಕೆ. ರಾಧಕೃಷ್ಣ ಹೊಳ್ಳ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ನಂ. 180, ಲಿಂಕ್ ರೋಡ್, ಮಲ್ಲೇಶ್ವರಂ, ಬೆಂಗಳೂರು–560 003.
5. ಅಧೀಕ್ಷಕರು ಹಾಗೂ ಪ್ರಕರಣದ ಮಂಡನಾಧಿಕಾರಿ, ಜಂಟಿ ಕೃಷಿ ನಿರ್ದೇಶಕರ ಕಛೇರಿ, ಚಿಕ್ಕಮಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
7. ಸರ್ಕಾರದ ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಸಹಾಯಕರು.
8. ಸಂಬಂಧಿಸಿದ ಅಧಿಕಾರಿ/ನೌಕರರಿಗೆ (ಆಯುಕ್ತರು, ಕೃಷಿಕೃಷಿ ಇಲಾಖೆ ಇವರ ಮುಖಾಂತರ).
9. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.